**All India Radio: Bangalore**
**National Bulletin In Kannada**
**09.08.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.08.2026 1.10 p.m.**

**<><><><>**

ಮುಖ್ಯಾಂಶಗಳು

1. ದೇಶಭಕ್ತಿಯನ್ನು ಉದ್ದೀಪನಗೊಳಿಸುವ 'ಹರ್ ಘರ್ ತಿರಂಗಾ ಅಭಿಯಾನಕ್ಕೆ ದೇಶಾದ್ಯಂತ ಇಂದು ಚಾಲನೆ
2. ಕ್ವಿಟ್ ಇಂಡಿಯಾ ಚಳವಳಿಯಲ್ಲಿ ಭಾಗವಹಿಸಿದ್ದ ಸ್ವಾತಂತ್ರ್ಯ ಹೋರಾಟಗಾರರಿಗೆ ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಗೌರವ ನಮನ
3. ಕರ್ನಾಟಕ, ಮದ್ರಾಸ್, ಕೊಲ್ಕತ್ತಾ, ಮಧ್ಯಪ್ರದೇಶದ ಹೈಕೋರ್ಟ್‌ಗಳಿಗೆ ೩೦ ನ್ಯಾಯಮೂರ್ತಿಗಳ ನೇಮಕಾತಿಗೆ ಕೇಂದ್ರ ಸರ್ಕಾರ ಅಧಿಸೂಚನೆ
4. ಕೊರಿಯಾ ಮಾಸ್ಟರ್ಸ್ ೨೦೨೬; ಮಹಿಳಾ ಸಿಂಗಲ್ಸ್ ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತದ ಅಶ್ಮಿತಾ ಚಾಲಿಹಾ
5. ಇಪ್ಪತ್ತು ವರ್ಷದೊಳಗಿನವರ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್; ಹೈಜಂಪ್‌ನಲ್ಲಿ ಬೆಳ್ಳಿ, ಲಾಂಗ್‌ಜಂಪ್‌ನಲ್ಲಿ ಕಂಚು ಗೆದ್ದ ಭಾರತ

<><><><>

ಹರ್ ಘರ್ ತಿರಂಗಾ ಅಭಿಯಾನ ಇಂದು ಆರಂಭವಾಗಿದ್ದು, ಈ ತಿಂಗಳ ೧೭ ರವರೆಗೆ ನಡೆಯಲಿದೆ. ನಾಗರಿಕರು, ರಾಷ್ಟ್ರ ಧ್ವಜವನ್ನು ಹಾರಿಸಲು ಹಾಗೂ ದೇಶಭಕ್ತಿ, ರಾಷ್ಟ್ರೀಯ ಏಕತೆ ಮತ್ತು ಭಾರತದ ಸಾಂಸ್ಕೃತಿಕ ಪರಂಪರೆಯನ್ನು ಆಚರಿಸುವ ಚಟುವಟಿಕೆಗಳಲ್ಲಿ ಭಾಗವಹಿಸಲು ಪ್ರೋತ್ಸಾಹಿಸುವುದು ಈ ಉಪಕ್ರಮದ ಗುರಿಯಾಗಿದೆ. ಈ ವರ್ಷದ ಅಭಿಯಾನವು ಭಾರತದ ರಾಷ್ಟ್ರೀಯ ಗೀತೆ "ವಂದೇ ಮಾತರಂ" ನ ೧೫೦ ನೇ ವಾರ್ಷಿಕೋತ್ಸವದೊಂದಿಗೆ ಹೊಂದಿಕೆಯಾಗುವುದರಿಂದ ವಿಶೇಷ ಮಹತ್ವವನ್ನು ಹೊಂದಿದೆ. ಇದು ದೇಶಭಕ್ತಿಯ ವಿಶಿಷ್ಟ ಆಚರಣೆಯಲ್ಲಿ ರಾಷ್ಟ್ರ ಧ್ವಜ ಮತ್ತು ರಾಷ್ಟ್ರೀಯ ಗೀತೆಯನ್ನು ಒಟ್ಟುಗೂಡಿಸುತ್ತದೆ. ಆಚರಣೆಗಳ ಭಾಗವಾಗಿ, ದೇಶಾದ್ಯಂತ ವಂದೇ ಮಾತರಂನ ಸಾಮೂಹಿಕ ಗಾಯನವನ್ನು ಆಯೋಜಿಸಲಾಗುತ್ತದೆ. ೨೦೦ ಕ್ಕೂ ಹೆಚ್ಚು ಭಾರತೀಯ ರಾಯಭಾರ ಕಚೇರಿಗಳು,

ಹೈಕಮಿಷನ್‌ಗಳು ಮತ್ತು ದೂತಾವಾಸ ಕಚೇರಿಗಳು ಅಭಿಯಾನವನ್ನು ಗುರುತಿಸಲು ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಿವೆ. ವಿಶೇಶವಾಗಿ ಸೂರ್ಯ ಪಥ ತಿರಂಗಾ ಡಿಜಿಟಲ್ ರಿಲೇ ಆಗಸ್ಟ್ ೧೫ ರಂದು ಫಿಜಿಯಲ್ಲಿರುವ ಭಾರತದ ರಾಜತಾಂತ್ರಿಕ ಕಚೇರಿಯಿಂದ ಪ್ರಾರಂಭವಾಗಿ ಸ್ಯಾನ್ ಫ್ರಾನ್ಸಿಸ್ಕೋದ ಭಾರತೀಯ ಕಾನ್ಸುಲೇಟ್ ಜನರಲ್‌ನಲ್ಲಿ ಮುಕ್ತಾಯಗೊಳ್ಳುತ್ತದೆ.

<><><>

ಕ್ವಿಟ್ ಇಂಡಿಯಾ ಚಳವಳಿಯಲ್ಲಿ ಭಾಗವಹಿಸಿದ ಸ್ವಾತಂತ್ರ್ಯ ಹೋರಾಟಗಾರರಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಅನೇಕ ಸ್ವಾತಂತ್ರ್ಯ ಹೋರಾಟಗಾರರು, ಮಹಾತ್ಮ ಗಾಂಧಿಯವರ "ಮಾಡು ಇಲ್ಲವೇ ಮಡಿ" ಎಂಬ ಘೋಷಣೆಯಿಂದ ಸ್ಫೂರ್ತಿ ಪಡೆದು ಸ್ವಾತಂತ್ರ್ಯ ಹೋರಾಟದಲ್ಲಿ ರಾಷ್ಟ್ರವನ್ನು ಒಂದುಗೂಡಿಸಿದರು. ಅವರ ಧೈರ್ಯ, ತ್ಯಾಗ ಮತ್ತು ದೇಶಭಕ್ತಿ ಪೀಳಿಗೆಗೆ ಸ್ಫೂರ್ತಿ ನೀಡುತ್ತದೆ ಎಂದು ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ, ಸ್ವಾತಂತ್ರ್ಯ ಹೋರಾಟಗಾರರ ಧೈರ್ಯ ಯಾವಾಗಲೂ ಪ್ರತಿಯೊಬ್ಬ ಭಾರತೀಯನಿಗೂ ಸ್ಫೂರ್ತಿಯಾಗಿ ಉಳಿಯುತ್ತದೆ. ಮಹಾತ್ಮಾ ಗಾಂಧಿಯವರ ನಾಯಕತ್ವದಿಂದ ಪ್ರೇರಿತರಾಗಿ, ಕ್ವಿಟ್ ಇಂಡಿಯಾ ಚಳವಳಿ ಭಾರತದ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ಶಕ್ತಿಯನ್ನು ತುಂಬಿತು. ವಸಾಹತುಶಾಹಿ ಆಳ್ವಿಕೆಯಿಂದ ಮುಕ್ತರಾಗಲು ಜನರ ಅಚಲ ದೃಢಸಂಕಲ್ಪವನ್ನು ಈ ಚಳವಳಿ ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ.

<><><>

ಮದ್ರಾಸ್, ಕೊಲ್ಕತ್ತಾ, ಮಧ್ಯಪ್ರದೇಶ ಮತ್ತು ಕರ್ನಾಟಕದ ಹೈಕೋರ್ಟ್‌ಗಳಿಗೆ ೩೦ ನ್ಯಾಯಮೂರ್ತಿಗಳ ನೇಮಕಾತಿಗೆ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಕಾನೂನು ಮತ್ತು ನ್ಯಾಯ ಸಚಿವಾಲಯ ಹೊರಡಿಸಿದ ಅಧಿಸೂಚನೆಯ ಪ್ರಕಾರ, ನೇಮಕಾತಿಗಳಲ್ಲಿ ೨೦ ವಕೀಲರು ಮತ್ತು ೧೦ ನ್ಯಾಯಾಂಗ ಅಧಿಕಾರಿಗಳು ಸೇರಿದ್ದಾರೆ.

ಒಟ್ಟು ೧೫ ನ್ಯಾಯಮೂರ್ತಿಗಳನ್ನು ಮದ್ರಾಸ್ ಹೈಕೋರ್ಟ್‌ಗೆ, ೮ ನ್ಯಾಯಮೂರ್ತಿಗಳನ್ನು ಕೊಲ್ಕತ್ತಾ ಹೈಕೋರ್ಟ್‌ಗೆ, ೬ ನ್ಯಾಯಮೂರ್ತಿಗಳನ್ನು ಕರ್ನಾಟಕ ಹೈಕೋರ್ಟ್‌ಗೆ ಮತ್ತು ಒಬ್ಬರು ನ್ಯಾಯಮೂರ್ತಿಗಳನ್ನು ಮಧ್ಯಪ್ರದೇಶ ಹೈಕೋರ್ಟ್‌ಗೆ ನೇಮಿಸಲಾಗಿದೆ. ಭಾರತದ ಮುಖ್ಯ ನ್ಯಾಯಮೂರ್ತಿ ಮತ್ತು ಸುಪ್ರೀಂ ಕೋರ್ಟ್ ಕೊಲಿಜಿಯಂನೊಂದಿಗೆ ಸಮಾಲೋಚಿಸಿ ರಾಷ್ಟ್ರಪತಿಗಳು ಈ ನೇಮಕಾತಿಗಳನ್ನು ಮಾಡಿದ್ದಾರೆ. ಹೊಸದಾಗಿ ನೇಮಕಗೊಂಡ

ನ್ಯಾಯಮೂರ್ತಿಗಳು, ಮುಂದಿನ ದಿನಗಳಲ್ಲಿ ಪ್ರಮಾಣ ವಚನ ಸ್ವೀಕರಿಸಿ, ಅಧಿಕಾರ ವಹಿಸಿಕೊಳ್ಳುವ ನಿರೀಕ್ಷೆಯಿದೆ. ಈ ನೇಮಕಾತಿಗಳು ನಾಲ್ಕು ಹೈಕೋರ್ಟ್‌ಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಮತ್ತು ಬಾಕಿ ಇರುವ ಪ್ರಕರಣಗಳ ವಿಲೇವಾರಿಯನ್ನು ಸುಧಾರಿಸಲು ಸಹಾಯ ಮಾಡುತ್ತದೆ ಎಂದು ನಿರೀಕ್ಷಿಸಲಾಗಿದೆ.

<><><>

ವಸಾಹತುಶಾಹಿ ಯುಗದ ಕಾನೂನುಗಳನ್ನು ಬದಲಾಯಿಸಿ, ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಜಾರಿಗೆ ತಂದಿರುವ ಮೂರು ಹೊಸ ಕ್ರಿಮಿನಲ್ ಕಾನೂನುಗಳು ತಂತ್ರಜ್ಞಾನ, ಸಮಯ ಮತ್ತು ನಂಬಿಕೆ ಎಂಬ ಮೂರು ಪ್ರಮುಖ ಸ್ತಂಭಗಳನ್ನು ಆಧರಿಸಿವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಗೋರಿಮೆಡುವಿನ ಪೊಲೀಸ್ ತರಬೇತಿ ಶಾಲಾ ಮೈದಾನದಲ್ಲಿ ಪುದುಚೇರಿ ಪೊಲೀಸರಿಗೆ ರಾಷ್ಟ್ರಪತಿಗಳ ಪೊಲೀಸ್ ಗೌರವ ಪ್ರದಾನ ಮಾಡಿ ಮಾತನಾಡಿದ ಅವರು, ಹೆಚ್ಚು ತಂತ್ರಜ್ಞಾನ ಆಧಾರಿತ ಮತ್ತು ಸಮಯಕ್ಕೆ ಅನುಗುಣವಾಗಿರುವ ವ್ಯವಸ್ಥೆಯ ಮೂಲಕ ನಾಗರಿಕರಿಗೆ ನ್ಯಾಯವನ್ನು ಖಚಿತಪಡಿಸುವುದು ಹೊಸ ಕ್ರಿಮಿನಲ್ ಕಾನೂನುಗಳ ಉದ್ದೇಶವಾಗಿದೆ ಎಂದರು. ಪುದುಚೇರಿ ಪೊಲೀಸರು ೫ ಸಾವಿರಕ್ಕಿಂತ ಕಡಿಮೆ ಸಿಬ್ಬಂದಿಯನ್ನು ಹೊಂದಿದ್ದರೂ, ಪುದುಚೇರಿಯನ್ನು ರಕ್ಷಿಸುವುದು, ಅದರ ಆಂತರಿಕ ಭದ್ರತೆಯನ್ನು ಕಾಪಾಡಿಕೊಳ್ಳುವುದು ಮತ್ತು ಶ್ರೀಮಂತ ಆಧ್ಯಾತ್ಮಿಕ ಪರಂಪರೆಯನ್ನು ಹೊಂದಿರುವ ಕೇಂದ್ರಾಡಳಿತ ಪ್ರದೇಶದ ಗೌರವ ಮತ್ತು ಘನತೆಯನ್ನು ಕಾಪಾಡುವ ಜವಾಬ್ದಾರಿಯನ್ನು ಹೊಂದಿದ್ದಾರೆ ಎಂದು ಸಚಿವ ಅಮಿತ್ ಶಾ ಹೇಳಿದರು.

<><><>

ಕೇರಳಂನ ಮಲಪ್ಪುರಂನಲ್ಲಿ ಅಕ್ರಮ ಸ್ಫೋಟಕಗಳ ಬೃಹತ್ ಸರಕನ್ನು ವಶಪಡಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ದಳ-ಎನ್‌ಐಎ, ಮತ್ತೊಬ್ಬ ಆರೋಪಿಯನ್ನು ಬಂಧಿಸಿದೆ. ಆರೋಪಿಯನ್ನು ಮಲಪ್ಪುರಂ ಜಿಲ್ಲೆಯ ಮಂಜೇರಿಯಿಂದ ಬಂಧಿಸಲಾಗಿದೆ. ಈತ ಸ್ಫೋಟಕಗಳ ಅಕ್ರಮ ಸಂಗ್ರಹಣೆಯಲ್ಲಿ ಭಾಗಿಯಾಗಿದ್ದ ಎಂದು ಎನ್‌ಐಎ ತಿಳಿಸಿದೆ. ಕರ್ನಾಟಕದ ವಿಜಯಪುರದಿಂದ ಇನ್ನೂ ಮೂವರು ಆರೋಪಿಗಳನ್ನು ಎನ್‌ಐಎ ಅಧಿಕಾರಿಗಳು ಶುಕ್ರವಾರ ಬಂಧಿಸಿದ್ದರು.

<><><>

ಜಾರ್ಖಂಡ್‌ನ ರಾಂಚಿಯಲ್ಲಿ ಜೆಪಿಎಸ್‌ಸಿ ಮತ್ತು ಜೆಎಸ್‌ಎಸ್‌ಸಿ ನೇಮಕಾತಿಯಲ್ಲಿ ನಡೆದ ಅಕ್ರಮಕ್ಕೆ ಪ್ರತಿಭಟನೆ ನಡೆಸುತ್ತಿರುವ ವಿದ್ಯಾರ್ಥಿಗಳು ಇಂದು ರಾಜ್ಯ ಸರ್ಕಾರದ ಪ್ರತಿನಿಧಿಗಳೊಂದಿಗೆ

ಮತ್ತೊಂದು ಸುತ್ತಿನ ಮಾತುಕತೆ ನಡೆಸಲಿದ್ದಾರೆ. ಜಾರ್ಖಂಡ್ ಸರ್ಕಾರ ಮತ್ತು ಪ್ರತಿಭಟನೆನಿರತ ವಿದ್ಯಾರ್ಥಿಗಳ ಮುಖಂಡರ ನಡುವಿನ ಮಾತುಕತೆ ಇಂದು ಮಧ್ಯಾಹ್ನ ನಡೆಯುವ ಸಾಧ್ಯತೆಯಿದೆ. ಸರ್ಕಾರ ಮಟ್ಟದ ನಿಯೋಗವು ವಿದ್ಯಾರ್ಥಿಗಳೊಂದಿಗೆ ನಡೆದ ಮೊದಲ ಸುತ್ತಿನ ಮಾತುಕತೆಯ ವಿವರಗಳನ್ನು ಮುಖ್ಯಮಂತ್ರಿ ಹೇಮಂತ್ ಸೊರೆನ್ ಅವರಿಗೆ ವಿವರಿಸಿದೆ.

<><><>

ಕಾಕೋರಿ ರೈಲು ಕಾರ್ಯಾಚರಣೆಯ ಅಮರ ಕ್ರಾಂತಿಕಾರಿಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಕಾಕೋರಿ ರೈಲು ಕಾರ್ಯಾಚರಣೆಯು ಭಾರತದ ಸ್ವಾತಂತ್ರ್ಯ ಹೋರಾಟದ ಮರೆಯಲಾಗದ ಅಧ್ಯಾಯವಾಗಿದ್ದು, ಬ್ರಿಟಿಷರ ಅನ್ಯಾಯ ಮತ್ತು ದಬ್ಬಾಳಿಕೆಯ ವಿರುದ್ಧದ ಸಶಸ್ತ್ರ ಕ್ರಾಂತಿಗೆ ಹೊಸ ವೇಗ ನೀಡಿತು ಎಂದು ಹೇಳಿದ್ದಾರೆ. ಚಂದ್ರಶೇಖರ ಆಜಾದ್ ಮತ್ತು ರಾಮ ಪ್ರಸಾದ್ ಬಿಸ್ಮಿಲ್ ಅವರ ನೇತೃತ್ವದಲ್ಲಿ ಧೈರ್ಯಶಾಲಿ ಸ್ವಾತಂತ್ರ್ಯ ಹೋರಾಟಗಾರರು ತಮ್ಮ ಅಚಲ ಧೈರ್ಯ ಮತ್ತು ಸಮರ್ಪಣೆಯ ಮೂಲಕ ದೇಶದ ಸಂಪನ್ಮೂಲಗಳು ಜನರಿಗೆ ಸೇರಿವೆ ಎಂಬ ಸಂದೇಶವನ್ನು ಬ್ರಿಟಿಷ್ ಆಡಳಿತಕ್ಕೆ ರವಾನಿಸಿದರು. ಕಾಕೋರಿ ರೈಲು ಕಾರ್ಯಾಚರಣೆಯ ಎಲ್ಲ ಅಮರ ಕ್ರಾಂತಿಕಾರಿಗಳಿಗೆ ರಾಷ್ಟ್ರ ಸದಾ ಋಣಿಯಾಗಿರಲಿದೆ ಎಂದು ಕೇಂದ್ರ ಗೃಹ ಸಚಿವರು ಹೇಳಿದ್ದಾರೆ.

<><><>

ಭಾರತದ ಬ್ಯಾಡ್ಮಿಂಟನ್ ಆಟಗಾರ್ತಿ ಅಶ್ಮಿತಾ ಚಾಲಿಹಾ ಅವರು ಅದ್ಭುತ ಹೋರಾಟದ ಮೂಲಕ ಕೊರಿಯಾ ಮಾಸ್ಟರ್ಸ್ ೨೦೨೫ರ ಮಹಿಳಾ ಸಿಂಗಲ್ಸ್ ಪ್ರಶಸ್ತಿ ಮುಡಿಗೇರಿಸಿಕೊಂಡಿದ್ದಾರೆ. ಇಂದು ಬೆಳಗ್ಗೆ ನಡೆದ ಫೈನಲ್‌ನಲ್ಲಿ ಅಸ್ಸಾಂನ ಅಶ್ಮಿತಾ ಚಾಲಿಹಾ ಅವರು, ಚೀನಾದ ಹಾನ್ ಕಿಯಾನ್ ಕ್ಸಿ ಅವರನ್ನು ೧೪-೨೧, ೨೧-೧೪, ೨೧-೧೪ ಸೆಟ್‌ಗಳಿಂದ ಪರಾಭವಗೊಳಿಸಿದರು. ಮೊದಲ ಸೆಟ್‌ನಲ್ಲಿ ಸೋತ ಬಳಿಕ ಸತತ ಎರಡು ಸೆಟ್‌ಗಳಲ್ಲಿ ಗೆಲುವು ಸಾಧಿಸಿದ ಅಶ್ಮಿತಾ ಅವರು, ೫೩ ನಿಮಿಷಗಳಲ್ಲಿ ಪಂದ್ಯವನ್ನು ತಮ್ಮದಾಗಿಸಿಕೊಂಡರು. ಇದು ಅವರ ಮೊದಲ ಬಿ.ಡಬ್ಲ್ಯು.ಎಫ್. ಪ್ರಶಸ್ತಿಯಾಗಿದೆ.

<><><>

ಅಮೆರಿಕದಲ್ಲಿ ನಡೆಯುತ್ತಿರುವ ೨೦ ವರ್ಷದೊಳಗಿನವರ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಪದಕಗಳ ಸಂಖ್ಯೆ ಮೂರಕ್ಕೆ ಏರಿಕೆಯಾಗಿದೆ. ಭಾರತದ ಬಸಂತ್ ಕುಮಾರ್ ಮೇಘವಾಲ್ ಇಂದು ಹೈಜಂಪ್‌ನಲ್ಲಿ ಬೆಳ್ಳಿ ಗೆದ್ದರೆ, ಶಹನವಾಜ್ ಖಾನ್, ಲಾಂಗ್ ಜಂಪ್‌ನಲ್ಲಿ ಕಂಚಿನ ಪದಕ ಗೆದ್ದಿದ್ದಾರೆ. ಪುರುಷರ ಹೈಜಂಪ್‌ನಲ್ಲಿ, ೧೯ ವರ್ಷದ ಬಸಂತ್ ಕುಮಾರ್, ೨.೨೧

ಮೀಟರ್ ಜಿಗಿದು ತಮ್ಮ ವೈಯಕ್ತಿಕ ಶ್ರೇಷ್ಠ ಸಾಧನೆ ಮಾಡುವ ಮೂಲಕ ಬೆಳ್ಳಿ ಪದಕ ಗೆದ್ದಿದ್ದಾರೆ. ಈ ಮೂಲಕ ೨೦ ವರ್ಷದೊಳಗಿನವರ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನ ಹೈಜಂಪ್‌ನಲ್ಲಿ ಪದಕ ಗೆದ್ದ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಪುರುಷರ ಲಾಂಗ್ ಜಂಪ್‌ನಲ್ಲಿ, ೧೮ ವರ್ಷದ ಶಹನವಾಜ್ ೭.೮೪ ಮೀಟರ್ ಜಿಗಿಯುವ ಮೂಲಕ ಕಂಚಿನ ಪದಕ ಗೆದ್ದರು. ಇದಕ್ಕೂ ಮೊದಲು, ಜಾವೆಲಿನ್ ಎಸೆತದಲ್ಲಿ, ಆಶಿಶ್ ಯಾದವ್ ಬೆಳ್ಳಿ ಪದಕ ಗೆದ್ದರು. ನೀರಜ್ ಚೋಪ್ರಾ ಅವರ ನಂತರ ೨೦ ವರ್ಷದೊಳಗಿನವರ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಗೆದ್ದ ಎರಡನೇ ಭಾರತೀಯರಾದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>